**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ - 6606/2024**
**ಚಾಸಾ - 0 1/ ಪ್ರಾಸಾ - 01**

| | |
|---|---|
| ಹೆಸರು | **ಗಿರಿಜೇಶ್** |
| ತಂದೆಯ ಹೆಸರು | **ಲೇಟ್ ಮಂಜುನಾಥ್** |
| ವಯಸ್ಸು | **74** |
| ಉದ್ಯೋಗ | **ನಿವೃತ್ತ ಸರ್ಕಾರಿ ನೌಕರ** |
| ವಿಳಾಸ | **ಕೆಂಗೇರಿ** |

**ದಿನಾಂಕ: 05-02-2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ಈ ಪ್ರಕರಣದ ಆರೋಪಿಗಳು ನಮ್ಮ ಗ್ರಾಮದವರು . ನನ್ನ ಮತ್ತು ಆರೋಪಿಗಳ ನಡುವೆ ಸಣ್ಣ ಪುಟ್ಟ ಮನಸ್ಥಾಪವಾಗಿತ್ತು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ನಾನು ಆಸ್ಪತ್ರೆಯಲ್ಲಿ ಇದ್ದಾಗ ಪೋಲೀಸರು ನನ್ನಿಂದ ಖಾಲಿ ಹಾಳೆಗಳ ಮೇಲೆ ನನ್ನ ಹೆಬ್ಬೆಟ್ಟಿನ ಗುರುತನ್ನು ಪಡೆದುಕೊಂಡರು. ಈಗ ಸಾಕ್ಷಿಗೆ ದೂರನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಹೆಬ್ಬಿಟ್ಟಿನ ಗುರುತನ್ನು ಸಾಕ್ಷಿಯು ಗುರುತಿಸಿರುತ್ತಾರೆ. ದೂರನ್ನು ನಿಪಿ-1 ಎಂದು ಗುರುತಿಸಲಾಯಿತು. ನನಗೆ ನಿಪಿ-1ರಲ್ಲಿ ಇರುವ ವಿಷಯದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು. ನಾನು ಮತ್ತು ಅವರು ಪುರಸ್ಕರಿಸಿ ಪಾಟೀ ಸವಾಲು ಮಾಡಲು ಅ ನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿ.17.07.2024 ರಂದು ಮಧ್ಯಾಹ್ನ ಸುಮಾರು 2.30ರ ಸಮಯದಲ್ಲಿನೀವು ಮತ್ತು ಚಾಸಾ-2 ರಿಂದ 5ರವರು ಕಾರಿನ ಸಂ.ಕೆಎ-03-Z-5179ರಲ್ಲಿ ಹೋಗುತ್ತಿದ್ದಾಗ ಜೆಎ-02-ಎಂ ಪಿ -5962ರ ಜೆಸಿಬಿ ಚಾಲಕ ಹಾಗೂ ಮಾಲೀಕರಾದ ಆರೋಪಿಗಳು ನಿಮ್ಮ ಕಾರನ್ನು ಅಡ್ಡಕಟ್ಟಿ ನಿಮಗೆ ಬಾಯಿಗೆ ಬಂಂದತೆ ಬೈದು, ಕೈಗಳಿಂದ ಹೊಡೆದು ಹಲ್ಲೆ ಮಾಡಿರುತ್ತಾರೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ನೀವು ದಿಃ 18.07.2024ರಂದು ನಿಪಿ-1ರಂತೆ ದೂರನ್ನು ನೀಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಪಾಟೀ **ಸವಾಲುಃ- ಆರೋಪಿಗಳ ಪರ ಶ್ರೀ. ಆರ್.ಜಿ, ವಕೀಲರಿಂದಃ-**

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2ನೇ ಅ. ನ್ಯಾ . ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ -6606/2024**

**ಚಾಸಾ - 03/** ಪ್ರಾಸಾ **- 02**

| | |
|---|---|
| ಹೆಸರು | **ಶಾಮಲ** |
| ಗಂಡನ ಹೆಸರು | **ಪ್ರಕಾಶ್ ರಾಜ್** |
| ವಯಸ್ಸು | **47** |
| ಉದ್ಯೋಗ | **ಖಾಸಗಿ ಕೆಲಸ** |
| ವಿಳಾಸ | **ಸುಬ್ಬರಾಯಪ್ಪನವಾಳ್ಯ** |

**ದಿನಾಂಕಃ 06.02.2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಈ ಪ್ರಕರಣದ ಆರೋಪಿಗಳು ನಮ್ಮ ಗ್ರಾಮದವರು. ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು. ನಾನು ಮತ್ತು ಅವರು ಪುರಸ್ಕರಿಸಿ ಪಾಟೀ ಸವಾಲು ಮಾಡಲು ಅ ನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ಸಾಕ್ಷಿಗೆ ತಾನು ನೀಡಿರುವ ಹೇಳಿಕೆಯ ಭಾಗವಾದ "ನಾನು ಮೇಲ್ಕಂಡ ವಿಳಾಸದಲ್ಲಿ –---------------ಪುನಃ ನೋಡಿದರೆ ಗುರುತಿಸುತ್ತೇನೆ " ಓದಿ ತಿಳಿಸಲಾಯಿತು. ಸಾಕ್ಷಿಯು ತಾನು ನೀಡಿರುವ ಹೇಳಿಕೆಯನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಪಾಟೀ **ಸವಾಲುಃ- ಆರೋಪಿಗಳ ಪರ ಶ್ರೀ.ಆರ್. ಜಿ, ವಕೀಲರಿಂದಃ-**

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2ನೇ ಅ. ನ್ಯಾ . ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ -6606/2024**

**ಚಾಸಾ - 04/** ಪ್ರಾಸಾ **- 03**

| | |
|---|---|
| ಹೆಸರು | **ಪ್ರಜ್ವಲ್** |
| ತಂದೆಯ ಹೆಸರು | **ಪ್ರಕಾಶ್ ರಾಜ್** |
| ವಯಸ್ಸು | **20** |
| ಉದ್ಯೋಗ | **ವಿದ್ಯಾರ್ಥಿ** |
| ವಿಳಾಸ | **ಸುಬ್ಬರಾಯಪ್ಪನಪಾಳ್ಯ** |

**ದಿನಾಂಕಃ 06.02.2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಈ ಪ್ರಕರಣದ ಆರೋಪಿಗಳು ನಮ್ಮ ಗ್ರಾಮದವರು. ಈಗ ಸಾಕ್ಷಿಗೆ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿ-03 ಎಂದು, ಮತ್ತು ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ನಾನು 2024ನೇ ಇಸವಿಯಲ್ಲಿ ಖಾಸಗಿ ಕೆಲಸದ ನಿಮಿತ್ತ ಪೋಲೀಸ್ ಠಾಣೆಗೆ ಹೋಗಿದ್ದಾಗ ಪೋಲೀಸರು ನನ್ನಿಂದ ನಿಪಿ-3ಕ್ಕೆ ಸಹಿಯನ್ನು ಪಡೆದುಕೊಂಡರು . ನಿಪಿ-3ಕ್ಕೆ ನನ್ನ ಜೊತೆ ಬೇರೆ ಯಾರು ಸಹಿಯನ್ನು ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು. ನಾನು ಮತ್ತು ಅವರು ಪುರಸ್ಕರಿಸಿ ಪಾಟೀ ಸವಾಲು ಮಾಡಲು ಅ ನುಮತಿ ನೀಡಲಾಯಿತು.**

ಪಾಟೀ ಸವಾಲು**:- ಮಾನ್ಯ** ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ**:-**

ದಿಃ18.07.2024ರಂದು ಬೆಳಿಗ್ಗೆ 10.00 ರಿಂದ 10.45ರ ಸಮಯದಲ್ಲಿ ನೀವು ತೋರಿಸಿದ ಜಾಗದಲ್ಲಿ ಪೋಲೀಸರು ನಿಪಿ-3ರಂತೆ ಪಂಚನಾಮೆಯನ್ನು ಮಾಡಿ ನಿಮ್ಮ, ಚಾಸಾ-6 ಮತ್ತು 7ರವರ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಸಾಕ್ಷಿಗೆ ತಾನು ನೀಡಿರುವ ಹೇಳಿಕೆಯ ಭಾಗವಾದ "ನಾನು ಮೇಲ್ಕಂಡ ವಿಳಾಸದಲ್ಲಿ –---------------ಪುನಃ ನೋಡಿದರೆ ಗುರುತಿಸುತ್ತೇನೆ " ಓದಿ ತಿಳಿಸಲಾಯಿತು. ಸಾಕ್ಷಿಯು ತಾನು ನೀಡಿರುವ ಹೇಳಿಕೆಯನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಪಾಟೀ **ಸವಾಲುಃ- ಆರೋಪಿಗಳ ಪರ ಶ್ರೀ.ಆರ್. ಜಿ, ವಕೀಲರಿಂದಃ-**

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2ನೇ ಅ. ನ್ಯಾ . ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**